ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

K.H.B ವಸತಿ ಬಡಾವಣೆಗಳ ಹಸ್ತಾಂತರದ ಬಗ್ಗೆ.

ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-

228 (216) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಗೃಹ ಮಂಡಳಿವತಿಯಿಂದ ಮಂಡ್ಯ ಕೆರೆ ಅಂಗಳದಲ್ಲಿ ಮಂಡ್ಯ ಗ್ರಾಮದ ಸರ್ವೆ ನಂ. 507ರಲ್ಲಿ ವಸತಿ ಬಡಾವಣೆಯನ್ನು ಅಭಿವೃದ್ಧಿ ಪಡಿಸಲಾಗಿದ್ದು ಯಾವಾಗ;

(ಆ) ಸದರಿ ಬಡಾವಣೆಯನ್ನು ಮಂಡ್ಯ ನಗರ ಸಭೆಗೆ ಹಸ್ತಾಂತರ ಮಾಡಲಾಗಿದೆಯೇ; (ವಿವರ ಒದಗಿಸುವುದು)

(ಇ) ಮಂಡ್ಯ ನಗರ ಸಭೆ ಈ ಬಡಾವಣೆಗೆ ಸಂಬಂಧಿಸಿದಂತೆ K.H.B ರವರಿಂದ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಬರಬೇಕಾದ ರೂ.77ಲಕ್ಷ ಶುಲ್ಕ ಬಂದ ನಂತರ ಹಸ್ತಾಂತರ ಮಾಡಿಕೊಳ್ಳುವುದಾಗಿ ತಿಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಶುಲ್ಕವನ್ನು K.H.B ಯಿಂದ ಪಾವತಿಸಿ ನಗರಸಭೆಗೆ ಹಸ್ತಾಂತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)